# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103

ದೂರವಾಣಿ : 0816-2254546 0816-2255596, 0816-2255597 ಫ್ಯಾಕ್ಸ್ : 0816-2270719


ಸಂಖ್ಯೆ:ತುವಿ:ಶೈವಿ:PG:ಪ.ಪ್ರ.ಪ.ಮಾ:2023-24/1334 ದಿನಾಂಕ:29.06.2024

## ಅಧಿಸೂಚನೆ

ವಿಷಯ: ಸ್ನಾತಕೋತ್ತರ ಎಲ್ ಎಲ್ ಎಂ ಮತ್ತು ಕನ್ನಡ ಅಧ್ಯಯನ ವಿಭಾಗಗಳ ಪ್ರಶ್ನೆ ಪತ್ರಿಕೆ ಮಾದರಿಗಳು ಮತ್ತು ಪಠ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಕುರಿತು.

ಉಲ್ಲೇಖ:1. ಸಂಯೋಜಕರು, ಸ್ನಾತಕೋತ್ತರ ಎಲ್ ಎಲ್ ಎಂ ಅಧ್ಯಯನ ಮತ್ತು ಸಂಶೋಧನಾ ವಿಭಾಗ ಇವರ ಮನವಿ ಪತ್ರ ದಿನಾಂಕ:07.03.2024

2. ಅಧ್ಯಕ್ಷರು, ಸ್ನಾತಕೋತ್ತರ ಕನ್ನಡ ಅಧ್ಯಯನ ಮಂಡಳಿ ಇವರ ಪತ್ರ ದಿನಾಂಕ:18.03.2024
3. ದಿನಾಂಕ:15.06.2024 ರಂದು ನಡೆದ ವಿದ್ಯಾವಿಷಯಕ ಪರಿಷತ್ ಮತ್ತು ಸಿಂಡಿಕೇಟ್ ಸಭೆಗಳ ನಿರ್ಣಯ
4. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:28.06.2024 (ಕಂಡಿಕೆ-155)

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (01) ರ ಪತ್ರದಲ್ಲಿ ಸ್ನಾತಕೋತ್ತರ ಎಲ್ ಎಲ್ ಎಂ ಅಧ್ಯಯನ ವಿಭಾಗದ ಸಂಯೋಜಕರು, ಸ್ನಾತಕೋತ್ತರ ಎಲ್ ಎಲ್ ಎಂ ವಿಭಾಗದ ಪಠ್ಯಕ್ರಮ ಮತ್ತು 70:30 ರಂತೆ ಪ್ರಶ್ನೆ ಪತ್ರಿಕೆ ಮಾದರಿಯನ್ನು ಸಿದ್ದಪಡಿಸಿ ಸಲ್ಲಿಸಿದ್ದು, 2023-24 ನೇ ಶೈಕ್ಷಣಿಕ ಸಾಲಿನಿಂದ ಅಳವಡಿಸಿಕೊಳ್ಳುವಂತೆ ಹಾಗೂ ಉಲ್ಲೇಖ (02) ರ ಪತ್ರದಲ್ಲಿ ಸ್ನಾತಕೋತ್ತರ ಕನ್ನಡ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಅಧ್ಯಯನ ಮಂಡಳಿಯ ಅಧ್ಯಕ್ಷರು, ಸ್ನಾತಕೋತ್ತರ ಕನ್ನಡ ಅಧ್ಯಯನ ವಿಭಾಗದ ಪಠ್ಯಕ್ರಮ ಮತ್ತು 70:30 ರಂತೆ ಪ್ರಶ್ನೆ ಪತ್ರಿಕೆ ಮಾದರಿಯನ್ನು ಸಿದ್ದಪಡಿಸಿ ಸಲ್ಲಿಸಿದ್ದು, 2024-25 ನೇ ಶೈಕ್ಷಣಿಕ ಸಾಲಿನಿಂದ ಅಳವಡಿಸಿಕೊಳ್ಳುವಂತೆ ಕೋರಿ ಮನವಿ ಸಲ್ಲಿಸಿರುತ್ತಾರೆ.

ಉಲ್ಲೇಖ (04) ರಲ್ಲಿನ ಸಕ್ಷಮ ಪ್ರಾಧಿಕಾರಗಳ ಅನುಮೋದನೆಯ ಮೇರೆಗೆ ಹಾಗೂ ಉಲ್ಲೇಖ (05) ರಲ್ಲಿನ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ ಸ್ನಾತಕೋತ್ತರ ಎಲ್ ಎಲ್ ಎಂ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಪಠ್ಯಕ್ರಮ ಮತ್ತು 70:30 ರ ಪ್ರಶ್ನೆ ಪತ್ರಿಕೆ ಮಾದರಿಯನ್ನು 2023-24 ನೇ ಶೈಕ್ಷಣಿಕ ಸಾಲಿನಿಂದ ಹಾಗೂ ಸ್ನಾತಕೋತ್ತರ ಕನ್ನಡ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಪಠ್ಯಕ್ರಮ ಮತ್ತು 70:30 ರ ಪ್ರಶ್ನೆ ಪತ್ರಿಕೆ ಮಾದರಿಯನ್ನು 2024-25 ನೇ ಶೈಕ್ಷಣಿಕ ಸಾಲಿನಿಂದ ಅಳವಡಿಸಿಕೊಳ್ಳಲು ತಿಳಿಸಲಾಗಿದೆ.

ಆದೇಶದ ಮೇರೆಗೆ

29/06/2024

ಉಪಕುಲಸಚಿವರು

ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾಲಯ

ಅಡಕ: ಸ್ನಾತಕೋತ್ತರ ಎಲ್ ಎಲ್ ಎಂ ಮತ್ತು ಕನ್ನಡ ವಿಭಾಗಗಳ ಪಠ್ಯಕ್ರಮ ಮತ್ತು ಪ್ರಶ್ನೆ ಪತ್ರಿಕೆ ಮಾದರಿ

ಗೆ,

1. ಅಧ್ಯಕ್ಷರು, ಸ್ನಾತಕೋತ್ತರ ಎಲ್ ಎಲ್ ಎಂ ಅಧ್ಯಯನ ಮಂಡಳಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ತಮ್ಮ ಅಧೀನದಲ್ಲಿ ಬರುವ ಎಲ್ಲಾ ಸಿಬ್ಬಂದಿಗಳ ಗಮನಕ್ಕೆ ತರುವುದು.
2. ಅಧ್ಯಕ್ಷರು, ಸ್ನಾತಕೋತ್ತರ ಕನ್ನಡ ಅಧ್ಯಯನ ಮಂಡಳಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ತಮ್ಮ ಅಧೀನದಲ್ಲಿ ಬರುವ ಎಲ್ಲಾ ಸಿಬ್ಬಂದಿಗಳ ಗಮನಕ್ಕೆ ತರುವುದು
3. ಸಂಯೋಜರು, ಸ್ನಾತಕೋತ್ತರ ಎಲ್ ಎಲ್ ಎಂ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ತಮ್ಮ ಅಧೀನದಲ್ಲಿ ಬರುವ ಎಲ್ಲಾ ಸಿಬ್ಬಂದಿಗಳ ಗಮನಕ್ಕೆ ತರುವುದು
4. ಅಧ್ಯಕ್ಷರು, ಸ್ನಾತಕೋತ್ತರ ಕನ್ನಡ ಅಧ್ಯಯನ ಮತ್ತು ಸಮಶೋಧನಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ತಮ್ಮ ಅಧೀನದಲ್ಲಿ ಬರುವ ಎಲ್ಲಾ ಸಿಬ್ಬಂದಿಗಳ ಗಮನಕ್ಕೆ ತರುವುದು.

ಪ್ರತಿಗಳು:

1. ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಎಲ್ಲಾ ವಿಭಾಗಗಳ ಉಪಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು– ಸದರಿ ಪಠ್ಯಕ್ರಮ ಮತ್ತು ಪ್ರಶ್ನೆ ಪತ್ರಿಕೆ ಮಾದರಿಗಳನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು ಹಾಗೂ ಇ-ಮೇಲ್ ಮುಖಾಂತರ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಕಳುಹಿಸುವುದು.
5. ಕಚೇರಿ ಪ್ರತಿ.